**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ: ಸಿ7(8)ಪ್ರಾಶಿಅ/ಆರ್.ಟಿ.ಇ/ದಾಖಲಾತಿ/473/2015-16 ದಿನಾಂಕ:15-04-2016

ಗೆ,
ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,
ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ,
ಬೆಂಗಳೂರು-560001.

ಮಾನ್ಯರೆ,

ವಿಷಯ: 2016-17ನೇ ಸಾಲಿನಲ್ಲಿ ಆರ್.ಟಿ.ಇ ಕೋಟಾದಡಿ ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

* * * * * *

2016-17 ನೇ ಸಾಲಿನಲ್ಲಿ ಆರ್.ಟಿ.ಇ ಕೋಟಾದಡಿ ಆನ್‌ಲೈನ್ ಮೂಲಕ ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ ಸಂಬಂಧ ಮಾಹಿತಿ ಕೋರಿ ದೂರವಾಣಿ ಕರೆಗಳು ಬರುತ್ತಿರುವುದರಿಂದ ದಿನಾಂಕ: 05.04.2016 ರ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆಯ ದಿನಾಂಕ ಮುಂದೂಡಿರುವ ಬಗ್ಗೆ ಪ್ರಕಟಣೆಯ ತುಣುಕನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಾ, ಸದರಿ ಪತ್ರಿಕಾ ಪ್ರಕಟಣೆಯನ್ನು ರಾಜ್ಯದ ಪ್ರಮುಖ ಪತ್ರಿಕೆಗಳಾದ ಪ್ರಜಾವಾಣಿ, ವಿಜಯವಾಣಿ ಮತ್ತು ವಿಜಯ ಕರ್ನಾಟಕ ಪತ್ರಿಕೆಗಳ ರಾಜ್ಯ ಆವೃತ್ತಿಯಲ್ಲಿ ಪ್ರಕಟಿಸಲು ಕೋರಿದೆ. ಪ್ರಕಟಣೆಯ ಜಾಹಿರಾತಿನ ವಿಸ್ತೀರ್ಣ ದಿನಪತ್ರಿಕೆಯ 1/8 ಭಾಗದಷ್ಟು (20 cms x 12 cms) ಇರುವಂತೆ ಪ್ರಕಟಿಸುವುದು. ಪ್ರಕಟಣಾ ವೆಚ್ಚವನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ವತಿಯಿಂದ ಭರಿಸಲಾಗುವುದು.

ತಮ್ಮ ನಂಬುಗೆಯ,

(ಕೆ.ಆನಂದ)
ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ

ದಿನಾಂಕ:15.04.2016

# ಪತ್ರಿಕಾ ಪ್ರಕಟಣೆ

2016–17 ನೇ ಸಾಲಿನಲ್ಲಿ ಆರ್.ಟಿ.ಇ ಕೋಟಾದಡಿ ಆನ್‌ಲೈನ್ ಮೂಲಕ ಸ್ವೀಕರಿಸಲಾಗಿರುವ ಅರ್ಜಿಗಳಲ್ಲಿ ಆಗಿರುವ ಲೋಪದೋಷಗಳನ್ನು ಸರಿಪಡಿಸಲು ಪೋಷಕರಿಗೆ ಎಸ್.ಎಂ.ಎಸ್. ಮೂಲಕ ಮಾಹಿತಿಯನ್ನು ನೀಡಲಾಗಿತ್ತು. ಆದರೂ ಸಹಾ ಬಹುತೇಕ ಪೋಷಕರು ಲೋಪದೋಷಗಳನ್ನು ಸರಿಪಡಿಸಿರುವುದಿಲ್ಲ. ತಂತ್ರಾಂಶದಲ್ಲಿ ಲೋಪದೋಷಗಳನ್ನು ಸರಿಪಡಿಸಲು ಮತ್ತೊಮ್ಮೆ ದಿನಾಂಕ: 19.04.2016 ವರೆಗೆ ಅವಕಾಶ ನೀಡಲಾಗಿದೆ. ವೆಬ್‌ಸೈಟ್ ಐ.ಪಿ ವಿಳಾಸ http://202.138.101.21/schregrte/RTE2015/RTEUpdateLogin.aspx ಇದಕ್ಕೆ ಭೇಟಿ ನೀಡಿ ತಿದ್ದುಪಡಿ ಮಾಡಿಕೊಳ್ಳಬಹುದಾಗಿದೆ. ಪೋಷಕರು ಈ ಅವಕಾಶವನ್ನು ತಪ್ಪದೆ ಸದುಪಯೋಗ ಪಡಿಸಿಕೊಳ್ಳಲು ಕೋರಲಾಗಿದೆ.

(ಕೆ.ಆನಂದ)
15/4/16

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ